**ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ**

**ಅಧಿಸೂಚನೆ-I**

**ಸಂಖ್ಯೆ: ಸಂವ್ಯಶಾಇ 63 ಶಾಸನ 2005, ಬೆಂಗಳೂರು, ದಿನಾಂಕ: 15ನೇ ಅಕ್ಟೋಬರ್ 2005**
**ಕರ್ನಾಟಕ ರಾಜ್ಯಪತ್ರ ವಿಶೇಷ ಪತ್ರಿಕೆ ಸಂಖ್ಯೆ 1864, ದಿನಾಂಕ: 15.10.2005**

ಕರ್ನಾಟಕ ರಾಜ್ಯ ವಿಧಾನಮಂಡಲದಲ್ಲಿ ಸರ್ಕಾರಿ ಕಾರ್ಯಕಲಾಪಗಳ ನಿರ್ವಹಣೆ ಅಧಿನಿಯಮ, 2005 (2005ರ ಕರ್ನಾಟಕ ಅಧಿನಿಯಮ ಸಂಖ್ಯೆ 26)ರ 1ನೇ ಪ್ರಕರಣದ (2)ನೇ ಉಪ ಪ್ರಕರಣದಿಂದ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ ಕರ್ನಾಟಕ ಸರ್ಕಾರವು, 2005ರ ಅಕ್ಟೋಬರ್ 15ನೇ ದಿನಾಂಕವನ್ನು ಸದರಿ ಅಧಿನಿಯಮವು ಜಾರಿಯಲ್ಲಿ ಬರುವ ದಿನಾಂಕವೆಂದು ಈ ಮೂಲಕ ಗೊತ್ತುಪಡಿಸುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ
ಹೆಸರಿನಲ್ಲಿ,

**ಜಿ.ಕೆ. ಬೋರೇಗೌಡ**
ಸರ್ಕಾರದ ಕಾರ್ಯದರ್ಶಿ (ಪ್ರಭಾರ),
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ
ಇಲಾಖೆ.

**ಅಧಿಸೂಚನೆ-II**

**ಸಂಖ್ಯೆ: ಸಂವ್ಯಶಾಇ 63 ಶಾಸನ 2005, ಬೆಂಗಳೂರು, ದಿನಾಂಕ: 15ನೇ ಅಕ್ಟೋಬರ್ 2005**
**ಕರ್ನಾಟಕ ರಾಜ್ಯಪತ್ರ ವಿಶೇಷ ಪತ್ರಿಕೆ ಸಂಖ್ಯೆ 1864, ದಿನಾಂಕ: 15.10.2005**

ಕರ್ನಾಟಕ ರಾಜ್ಯ ವಿಧಾನಮಂಡಲದಲ್ಲಿ ಸರ್ಕಾರಿ ಕಾರ್ಯಕಲಾಪಗಳ ನಿರ್ವಹಣೆ ಅಧಿನಿಯಮ, 2005 (2005ರ ಕರ್ನಾಟಕ ಅಧಿನಿಯಮ ಸಂಖ್ಯೆ 26)ರ 6ನೇ ಪ್ರಕರಣದಲ್ಲಿ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ ಕರ್ನಾಟಕ ಸರ್ಕಾರವು ಈ ಕೆಳಗೆ ನಮೂದಿಸಿರುವಂತೆ ಸರ್ಕಾರಿ ಕಾರ್ಯಕಲಾಪಗಳ ಸಲಹಾ ಸಮಿತಿಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರಚಿಸಿದೆ.

| | | |
|---|---|---|
| (1) | ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆಯ ಸಚಿವರು | ಅಧ್ಯಕ್ಷರು |
| (2) | ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆ.ಸು.) | ಸದಸ್ಯರು |
| (3) | ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಬಜೆಟ್ ಮತ್ತು ಸಂಪನ್ಮೂಲಗಳು) | ಸದಸ್ಯರು |
| (4) | ಸರ್ಕಾರದ ಕಾರ್ಯದರ್ಶಿ, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ | ಸದಸ್ಯರು |
| (5) | ಕರ್ನಾಟಕ ವಿಧಾನಮಂಡಲದ ಅಧಿವೇಶನ ಕರೆಯುವ ಮತ್ತು ಸಮಾಪನಗೊಳಿಸುವ ವಿಷಯದ ಕಾರ್ಯಹಂಚಿಕೆಗೆ ಸಂಬಂಧಪಟ್ಟ ಸರ್ಕಾರದ ಸಹ ಕಾರ್ಯದರ್ಶಿ, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ | ಕಾರ್ಯದರ್ಶಿ |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ
ಹೆಸರಿನಲ್ಲಿ,

**ಜಿ.ಕೆ. ಬೋರೇಗೌಡ**
ಸರ್ಕಾರದ ಕಾರ್ಯದರ್ಶಿ (ಪ್ರಭಾರ),
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ.